ನೀಡಲಾಗುವುದು;

ಈ) ಈಗಾಗಲೇ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮಾಸಿಕ ರೂ. 350.00ಗಳನ್ನು 500. ಗಳವರೆಗೆ ಹೆಚ್ಚಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಉ) ಹಾಗಿದ್ದಲ್ಲಿ ಎಂದಿನಿಂದ ನೀಡಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಆಯವ್ಯಯದ ಲಭ್ಯತೆ ಮತ್ತು ಅಗತ್ಯತೆಯ ಮೇರೆಗೆ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯ ಬಗ್ಗೆ ಪರಿಶೀಲಿಸಲಾಗುವುದು.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗಕ್ಕೆ ಕೊಳವೆಬಾವಿ ನಿರ್ಮಿಸುವುದು ಹಾಗೂ ವಿದ್ಯುತ್ ಒದಗಿಸುವುದು.

2439(1926)

ಶ್ರೀ ಸುಣಗಾರ ಶರಣಪ್ಪ ತಿಪ್ಪಣ್ಣ (ಸಿಂಧಗಿ): ಮಾನ್ಯ ಸಮಾಜಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧಗಿ ಮತ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ ಪಂಗಡಗಳ ಅಭಿವೃದ್ಧಿ ನಿಗಮದ ವೈಯಕ್ತಿಕ ಕೊಳವೆ ಬಾವಿ (ಗಂಗಾ ಕಲ್ಯಾಣ) ಯೋಜನೆಯಡಿಯಲ್ಲಿ ಕಳೆದ ನಾಲ್ಕು ತಿಂಗಳಲ್ಲಿ ಕೊರೆಯಲಾದ ಬಾವಿಗಳ ಸಂಖ್ಯೆ ಎಷ್ಟು? (ಆರ್ಥಿಕ, ಭೌತಿಕ ವಿವರ ನೀಡುವುದು);

ಆ) ಸದರಿ ಯೋಜನೆಯು ಪರಿಶಿಷ್ಟರಿಗೆ ಮುಟ್ಟುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ಯೋಜನೆಯನ್ನು ಕಾರ್ಯರೂಪಕ್ಕೆ ತರಲು ಸರ್ಕಾರ ಕ್ರಮ

ಕೈಗೊಳ್ಳುವುದೇ ಈ ಯೋಜನೆಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಈ) ಈ ಯೋಜನೆಯಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದವರಿಗೆ ವೈಯಕ್ತಿಕ ಕೊಳವೆ ಬಾವಿಗಳಿಗೆ ಅಭಿವೃದ್ಧಿ ನಿಗಮದಿಂದ ವಿದ್ಯುಚ್ಛಕ್ತಿ ಸೌಲಭ್ಯವನ್ನು ಒದಗಿಸದೇ ಇರುವ ಬಾವಿಗಳ ಸಂಖ್ಯೆ ಎಷ್ಟು?

ಉ) ಎಂದಿನಿಂದ ಈ ಬಾವಿಗಳ ವಿದ್ಯುಚ್ಛಕ್ತಿ ಸೌಲಭ್ಯವನ್ನು ಒದಗಿಸಲಾಗಿಲ್ಲ; ಅದಕ್ಕೆ ಕಾರಣಗಳೇನು?

ಊ) ಸದರಿ ವರ್ಗದವರಿಗೆ ಅದರಿಂದ ಆಗುವ ಅನಾನುಕೂಲತೆ ತಪ್ಪಿಸಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೆ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಸಿಂಧಗಿ ಮತ ಕ್ಷೇತ್ರದಲ್ಲಿ ಕಳೆದ ನಾಲ್ಕು ತಿಂಗಳಲ್ಲಿ ವೈಯಕ್ತಿಕ ನೀರಾವರಿ ಯೋಜನೆಯಡಿ ಯಾವುದೇ ಕೊಳವೆಬಾವಿಯನ್ನು ಕೊರೆದಿರುವುದಿಲ್ಲ.

ಆ) ಇಲ್ಲ.

ಇ) ಈ ಯೋಜನೆಯು ಈಗಾಗಲೇ ಜಾರಿಯಲ್ಲಿದೆ.

ಈ) ಈ ಯೋಜನೆಯಡಿ ಸಿಂಧಗಿ ಮತ ಕ್ಷೇತ್ರದಲ್ಲಿ ವಿದ್ಯುಚ್ಛಕ್ತಿ ಸೌಲಭ್ಯ ಒದಗಿಸದೇ ಇರುವ ಬಾವಿಗಳ ಒಟ್ಟು ಸಂಖ್ಯೆ: 53.

ಉ ಮತ್ತು ಊ) 1997-98ನೇ ಸಾಲಿನಿಂದ ವಿದ್ಯುಚ್ಛಕ್ತಿ ಸೌಲಭ್ಯ ಒದಗಿಸಲಾಗಿಲ್ಲ. ನಿಗಮದ ವತಿಯಿಂದ ಕೆ.ಪಿ.ಟಿ. ಸಿ.ಎಲ್.ನಲ್ಲಿ ಹೆಸರುಗಳನ್ನು ನೊಂದಾಯಿಸಿದೆ. ಆದರೆ ವಿದ್ಯುತ್ ಪ್ರಸರಣ ನಿಗಮವು ವಿದ್ಯುದ್ದೀಕರಿಸಿಲ್ಲ ಜನವರಿ 2000ರಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ವಿದ್ಯುತ್ ಪ್ರಸರಣ ನಿಗಮವು ತ್ವರಿತವಾಗಿ ವಿದ್ಯುತ್ ಸೌಲಭ್ಯ ನೀಡಲು ಒಪ್ಪಿದ್ದು ಕೆಲಸವನ್ನು ತ್ವರಿತವಾಗಿ ಮುಗಿಸಲಾಗುವುದು.

ತುಮಕೂರು ನಗರಸಭೆಯಲ್ಲಿರುವ ಖಾತೆಗಳು.

2440(೧೯೨೯)

ಶ್ರೀ ಶಿವಣ್ಣ ಎಸ್. (ತುಮಕೂರು): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?